**Akashvani : Bangalore**
**National Bulletin In Kannada**
**11.05.2024 / 19.35 hrs**

**<><*<><>*><>**

ಮುಖ್ಯಾಂಶಗಳು

೧. ನಾಲ್ಕನೇ ಹಂತದ ಲೋಕಸಭಾ ಚುನಾವಣೆಗೆ ಬಹಿರಂಗ ಪ್ರಚಾರ ಮುಕ್ತಾಯ; ಸೋಮವಾರ ೯೬ ಕ್ಷೇತ್ರಗಳಲ್ಲಿ ಮತದಾನ

೨. ಆಂಧ್ರಪ್ರದೇಶದ ವಿಧಾನಸಭೆಯ ಒಟ್ಟು ೧೭೫, ಒಡಿಶಾದ ೨೮ ವಿಧಾನಸಭಾ ಕ್ಷೇತ್ರಗಳಿಗೂ ನಾಡಿದ್ದು ಚುನಾವಣೆ

೩. ಸಂವಿಧಾನ ಬದಲಾವಣೆಗೆ ಕಾಂಗ್ರೆಸ್ ಯತ್ನ- ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ ಟೀಕೆ

೪. ಕೇಂದ್ರ ಸರ್ಕಾರದಿಂದ ತನಿಖಾ ಸಂಸ್ಥೆಗಳ ದುರ್ಬಳಕೆ- ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪ

೫. ಐಪಿಎಲ್ ಕ್ರಿಕೆಟ್; ಕೋಲ್ಕತಾ ನೈಟ್ ರೈಡರ್ಸ್ - ಮುಂಬೈ ಇಂಡಿಯನ್ಸ್ ತಂಡಗಳ ನಡುವಿನ ಪಂದ್ಯಕ್ಕೆ ಮಳೆರಾಯನ ಅಡ್ಡಿ

**<><*<><>*><>**

ಇದೇ ೧೩ ರಂದು ಸೋಮವಾರ ನಡೆಯಲಿರುವ ನಾಲ್ಕನೇ ಹಂತದ ಲೋಕಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ಸಂಜೆ ತೆರೆ ಬಿದ್ದಿದೆ. ಅಂದು ಆಂಧ್ರಪ್ರದೇಶದ ವಿಧಾನಸಭೆಗೆ ಒಂದೇ ಹಂತದಲ್ಲಿ ಚುನಾವಣೆ ನಡೆಯಲಿದೆ ಹಾಗೂ ಒಡಿಶಾ ವಿಧಾನಸಭೆಗೆ ನಡೆಯಲಿರುವ ಮೊದಲ ಹಂತದ ಚುನಾವಣೆಯ ಬಹಿರಂಗ ಪ್ರಚಾರವೂ ಸಂಜೆ ಮುಕ್ತಾಯಗೊಂಡಿದೆ. ಸೋಮವಾರದಂದು ೯ ರಾಜ್ಯಗಳು ಮತ್ತು ೧ ಕೇಂದ್ರಾಡಳಿತ ಪ್ರದೇಶದ ವ್ಯಾಪ್ತಿಗೆ ಬರುವ ಒಟ್ಟು ೯೬ ಲೋಕಸಭಾ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಉತ್ತರ ಪ್ರದೇಶದ ೧೩, ಮಹಾರಾಷ್ಟ್ರದ ೧೧, ಮಧ್ಯಪ್ರದೇಶ ಮತ್ತು ಪಶ್ಚಿಮ ಬಂಗಾಳದ ತಲಾ ೮, ಬಿಹಾರದ ೫, ಜಾರ್ಖಂಡ್ ಮತ್ತು ಒಡಿಶಾದ ತಲಾ ೪, ಕೇಂದ್ರಾಡಳಿತ ಪ್ರದೇಶವಾದ ಜಮ್ಮು ಮತ್ತು ಕಾಶ್ಮೀರದ ೧ ಲೋಕಸಭಾ ಕ್ಷೇತ್ರಗಳಿಗೆ ಈ ಹಂತದಲ್ಲಿ ಮತದಾನ ನಡೆಯಲಿದೆ. ಆಂಧ್ರಪ್ರದೇಶದ ೨೫ ಲೋಕಸಭಾ ಕ್ಷೇತ್ರಗಳು ಮತ್ತು ತೆಲಂಗಾಣದ ೧೭ ಲೋಕಸಭಾ ಕ್ಷೇತ್ರಗಳಿಗೆ ಇದೇ ಹಂತದಲ್ಲಿ ಏಕಕಾಲಕ್ಕೆ ಚುನಾವಣೆ ನಡೆಯಲಿದೆ. ಆಂಧ್ರಪ್ರದೇಶ ವಿಧಾನಸಭೆಯ ಎಲ್ಲ ೧೭೫ ಕ್ಷೇತ್ರಗಳಿಗೆ ಮತ್ತು ಒಡಿಶಾ ವಿಧಾನಸಭೆಯ ಒಟ್ಟು ೧೪೭ ಕ್ಷೇತ್ರಗಳ ಪೈಕಿ ೨೮ ಕ್ಷೇತ್ರಗಳಿಗೆ ಸೋಮವಾರ ಏಕಕಾಲಕ್ಕೆ ಮತದಾನ ನಡೆಯಲಿದೆ. ಮತದಾರರನ್ನು ಓಲೈಸಿಕೊಳ್ಳಲು ವಿವಿಧ ರಾಜಕೀಯ ಪಕ್ಷಗಳ ಪ್ರಮುಖ ನಾಯಕರು, ಈಗಾಗಲೇ ಬಹುತೇಕ ಕ್ಷೇತ್ರಗಳಲ್ಲಿ ವ್ಯಾಪಕ ಪ್ರಚಾರ ಮಾಡಿದ್ದಾರೆ. ಒಡಿಶಾದ ಕಂದಮಾಲ್ ಜಿಲ್ಲೆಯ ಫುಲ್ಬನಿಯಲ್ಲಿಂದು ಏರ್ಪಡಿಸಿದ್ದ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಪ್ರಧಾನಮಂತ್ರಿ ಹಾಗೂ ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ, ಜೂನ್ ೪ ರಂದು ಹೊರಬರಲಿರುವ ಸಾರ್ವತ್ರಿಕ ಚುನಾವಣೆಯ ಫಲಿತಾಂಶದ ನಂತರ ಕಾಂಗ್ರೆಸ್ ಪಕ್ಷ ಲೋಕಸಭೆಯಲ್ಲಿ ಪ್ರತಿಪಕ್ಷದ ಸ್ಥಾನವನ್ನೂ ಪಡೆಯಲು ಸಾಧ್ಯವಾಗುವುದಿಲ್ಲ ಎಂದರು.ªÀÄ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ ಆಂಧ್ರಪದೇಶದ ತಿರುಪತಿಯಲ್ಲಿಂದು ರೋಡ್ ಶೋ ನಡೆಸಿ, ಮತಯಾಚನೆ ಮಾಡಿದರು. ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ, ಬುಡಕಟ್ಟು ಜನಾಂಗದ ಪ್ರಾಬಲ್ಯವಿರುವ ಉತ್ತರ ಮಹಾರಾಷ್ಟ್ರದ ನಂದೂರ್‌ಬರ್ ಜಿಲ್ಲೆಯಲ್ಲಿ ಏರ್ಪಡಿಸಲಾಗಿದ್ದ ಚುನಾವಣಾ ರ್‍ಯಾಲಿಯಲ್ಲಿ ಭಾಗವಹಿಸಿದ್ದರು.

**<><*<><>*><>**

ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ, ಒಡಿಶಾದಲ್ಲಿಂದು ಬಿಜೆಪಿ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ ನಡೆಸಿದರು. ಒಡಿಶಾದ ಬರ್ಗಾರ್‌ನಲ್ಲಿ ಇಂದು ಮಧ್ಯಾಹ್ನ ಚುನಾವಣಾ ರ್‍ಯಾಲಿಯಲ್ಲಿ ಮಾತನಾಡಿದ ಪ್ರಧಾನಿ, ಭಾರತ ಸಂವಿಧಾನವನ್ನು ಬದಲಿಸಲು ಕಾಂಗ್ರೆಸ್ ಬಯಸಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ, ಪರಿಶಿಷ್ಟ ಸಮುದಾಯಗಳು ಮತ್ತು ಇತರ ಹಿಂದುಳಿದ ವರ್ಗಗಳಿಗೆ ನೀಡಿರುವ ಮೀಸಲಾತಿಯನ್ನು ರದ್ದುಪಡಿಸಿ, ತನ್ನ ಮತಬ್ಯಾಂಕ್‌ಗಳಿಗೆ ನೀಡಲಿದೆ ಎಂದು ಆರೋಪಿಸಿದರು. ಸಂವಿಧಾನ ಬದಲಿಸಲು ಅಥವಾ ಪರಿಶಿಷ್ಟ ಸಮುದಾಯಗಳು ಮತ್ತು ಇತರೆ ಹಿಂದುಳಿದ ವರ್ಗಗಳಿಗೆ ನೀಡಿರುವ ಮೀಸಲಾತಿಯನ್ನು ರದ್ದುಪಡಿಸಲು ಕಾಂಗ್ರೆಸ್ ಅವಕಾಶ ನೀಡುವುದಿಲ್ಲ. ಇದೇ ಮೋದಿ ಖಾತರಿ ಎಂದು ಭರವಸೆ ನೀಡಿದರು. ಇದಕ್ಕೂ ಮುನ್ನ ಬಾಲಂಗೀರ್‌ನಲ್ಲಿ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಖನಿಜಗಳ ಗಣಿ ರಾಜ್ಯವಾಗಿರುವ ಒಡಿಶಾ ಮತ್ತು ಬಡಜನರ ಅಭಿವೃದ್ಧಿಗೆ ಮುಖ್ಯಮಂತ್ರಿ ಹಾಗೂ ಬಿಜೆಡಿ

ಮುಖ್ಯಸ್ಥ ನವೀನ್ ಪಟ್ನಾಯಕ್, ಕಳೆದ ೨೫ ವರ್ಷಗಳ ಅವಧಿಯಲ್ಲಿ ಯಾವುದೇ ರೀತಿಯ ಕಾರ್ಯಕ್ರಮಗಳನ್ನು ರೂಪಿಸಿಲ್ಲ ಎಂದು ಟೀಕಿಸಿದರು. ಯುವಕರು ಜೀವನೋಪಾಯಕ್ಕಾಗಿ ಗುಜರಾತ್‌ನಂತಹ ರಾಜ್ಯಗಳಿಗೆ ವಲಸೆ ಹೋಗುತ್ತಿದ್ದಾರೆ. ರೈತರು ಬೆಳೆಯುವ ಭತ್ತ ಮತ್ತು ಇತರ ಕೃಷಿ ಉತ್ಪನ್ನಗಳಿಗೆ ಯೋಗ್ಯ ಬೆಲೆ ದೊರೆಯುತ್ತಿಲ್ಲ ಎಂದು ಹೇಳಿದರು. ಬಿಜೆಡಿ ಮುಖ್ಯಸ್ಥರು, ಜನಸಾಮಾನ್ಯರೊಂದಿಗೆ ಬೆರೆಯುತ್ತಿಲ್ಲ. ಜನರ ಕಷ್ಟ-ಸುಖ ಏನೆಂಬುದುದನ್ನು ಅವರು ಅರ್ಥಮಾಡಿಕೊಂಡಿಲ್ಲ. ನವೀನ್ ಪಟ್ನಾಯಕ್ ಸರ್ಕಾರದ ದಿನಗಣನೆ ಪ್ರಾರಂಭವಾಗಿದ್ದು, ವಿಧಾನಸಭಾ ಚುನಾವಣೆ ನಂತರ ಒಡಿಶಾದಲ್ಲಿ ಬಿಜೆಪಿ ಸರ್ಕಾರ ರಚಿಸಲಿದೆ ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ, ಕಂದಮಾಲ್ ಜಿಲ್ಲೆಯ ಫುಲ್ಬನಿಯಲ್ಲಿ ಏರ್ಪಡಿಸಿದ್ದ ಸಾರ್ವಜನಿಕ ಸಭೆಯಲ್ಲೂ ಪಾಲ್ಗೊಂಡಿದ್ದರು. ಒಡಿಶಾದಲ್ಲಿ ಬರುವ ಸೋಮವಾರದಿಂದ ಲೋಕಸಭೆ ಮತ್ತು ವಿಧಾನಸಭೆಗೆ ಏಕಕಾಲಕ್ಕೆ ನಾಲ್ಕು ಹಂತಗಳಲ್ಲಿ ಚುನಾವಣೆ ನಡೆಯಲಿದೆ. ಬಿಜೆಪಿ, ಕಾಂಗ್ರೆಸ್ ಹಾಗೂ ಬಿಜೆಡಿ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ, ಕೇಂದ್ರದ ತನಿಖಾ ಸಂಸ್ಥೆಗಳಾದ ಇಡಿ, ಸಿಬಿಐ ಮತ್ತು ಇತರ ಸಂಸ್ಥೆಗಳನ್ನು ಬಳಸಿಕೊಂಡು ರಾಜಕೀಯ ವಿರೋಧಿಗಳ ಮೇಲೆ ಸೇಡು ತೀರಿಸಿಕೊಳ್ಳಲು ಮುಂದಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆರೋಪಿಸಿದ್ದಾರೆ. ಬಿಹಾರದ ಪಾಟ್ನಾದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಇಂಡಿ ಮೈತ್ರಿಕೂಟದ ನಾಯಕರನ್ನು ಗುರಿಯಾಗಿಸಿಕೊಂಡು ಅವರಿಗೆ ತೊಂದರೆ ಕೊಡಲು ಸರ್ಕಾರ ಪ್ರಯತ್ನಿಸುತ್ತಿದೆ. ಹಣದುಬ್ಬರ, ಬಡತನ ಮತ್ತು ನಿರುದ್ಯೋಗ ಕುರಿತು ಪ್ರಧಾನಿಯವರು, ಎಲ್ಲೂ ಪ್ರಸ್ತಾಪ ಮಾಡುತ್ತಿಲ್ಲ ಎಂದು ಹೇಳಿದರು.

<><*<><>*><>

ಕಾಂಗ್ರೆಸ್‌ನ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕ ಗಾಂಧಿ, ಬುಡಕಟ್ಟು ಜನರ ಪ್ರಾಬಲ್ಯವಿರುವ ಉತ್ತರ ಮಹಾರಾಷ್ಟ್ರದ ನಂದುರ್‌ಬಾರ್ ಜಿಲ್ಲೆಯಲ್ಲಿಂದು ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಭಾಷಣ ಮಾಡಿದರು. ಕಾಂಗ್ರೆಸ್ ಪಕ್ಷ, ಕೇಂದ್ರದಲ್ಲಿ ಅಧಿಕಾರದಲ್ಲಿದ್ದಾಗ ಪರಿಶಿಷ್ಟ ಸಮುದಾಯಗಳ ಏಳಿಗೆಗಳಿಗೆ ಪೂರಕವಾದ ಹಲವಾರು ಕಾಯ್ದೆ ಮತ್ತು ಯೋಜನೆಗಳನ್ನು ಜಾರಿಗೆ ತಂದಿದೆ. ಬುಡಕಟ್ಟು ಜನರು ಹಾಗೂ ಅವಕಾಶ ವಂಚಿತರ ಹಿತರಕ್ಷಣೆಗಾಗಿ ಮನ್ರೇಗಾ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿದೆ ಎಂದರು.

<><*<><>*><>

ಬಿಜೆಪಿ, ಒಂದು ರಾಷ್ಟ್ರ, ಒಬ್ಬರೇ ನಾಯಕರು ಎಂಬ ಚಿಂತನೆಯನ್ನು ಉತ್ತೇಜಿಸುತ್ತಿದೆ ಎಂದು ಆಮ್‌ಆದ್ಮಿ ಪಕ್ಷದ ಹಿರಿಯ ನಾಯಕ ಅರವಿಂದ್ ಕೇಜ್ರಿವಾಲ್ ಆರೋಪಿಸಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಮ್‌ಆದ್ಮಿ ಪಕ್ಷವನ್ನು ಮುಗಿಸಲು ಬಿಜೆಪಿ ಪ್ರಯತ್ನಿಸುತ್ತಿದೆ. ಆದರೆ, ಆಪ್ ಒಂದು ಪಕ್ಷವಲ್ಲ, ಅದೊಂದು ಸಿದ್ಧಾಂತ ಎಂದರು.

<><*<><>*><>

ದೇಶಾದ್ಯಂತ ಮೇ ೭ ರಂದು ೯೩ ಕ್ಷೇತ್ರಗಳಲ್ಲಿ ನಡೆದ ಮೂರನೇ ಹಂತದ ಲೋಕಸಭಾ ಚುನಾವಣೆಯಲ್ಲಿ ಶೇಕಡ ೬೫.೬೮ರಷ್ಟು ಮತದಾನವಾಗಿದೆ ಎಂದು ಕೇಂದ್ರ ಚುನಾವಣಾ ಆಯೋಗ ತಿಳಿಸಿದೆ. ಶೇಕಡ ೬೬.೮೯ರಷ್ಟು ಪುರುಷರು ಹಾಗೂ ಶೇಕಡ ೬೪.೪೧ರಷ್ಟು ಮಹಿಳಾ ಮತದಾರರು, ತೃತೀಯ ಲಿಂಗಿಗಳ ಪೈಕಿ ಶೇಕಡ ೨೫.೨ ರಷ್ಟು ಮಂದಿ ತಮ್ಮ ಹಕ್ಕು ಚಲಾಯಿಸಿದ್ದಾರೆ. ಕರ್ನಾಟಕದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ಶೇಕಡ ೭೧.೮೪ ರಷ್ಟು ಮತದಾನವಾಗಿದೆ ಎಂದು ಆಯೋಗ ಹೇಳಿದೆ. ಬಾಗಲಕೋಟೆಯಲ್ಲಿ ಶೇಕಡ ೭೨.೬೬, ಬೆಳಗಾವಿಯಲ್ಲಿ ೭೧.೪೯, ಬಳ್ಳಾರಿಯಲ್ಲಿ ೭೩.೫೯, ಬೀದರ್‌ನಲ್ಲಿ ೬೫.೪೭, ವಿಜಯಪುರದಲ್ಲಿ ೬೬.೩೨, ಚಿಕ್ಕೋಡಿಯಲ್ಲಿ ೭೮.೬೬, ದಾವಣಗೆರೆಯಲ್ಲಿ ೭೬.೯೯, ಧಾರವಾಡದಲ್ಲಿ ೭೪.೩೭, ಕಲಬುರಗಿಯಲ್ಲಿ ೬೨.೨೫, ಹಾವೇರಿಯಲ್ಲಿ ೭೭.೬೦, ಕೊಪ್ಪಳದಲ್ಲಿ ೭೦.೯೯, ರಾಯಚೂರು ೬೪.೬೬, ಶಿವಮೊಗ್ಗ ೭೮.೩೩ ಹಾಗೂ ಉತ್ತರಕನ್ನಡದಲ್ಲಿ ೬೬.೫೩ ಮತದಾನವಾಗಿದೆ ಎಂದು ಆಯೋಗ ಮಾಹಿತಿ ನೀಡಿದೆ.

<><*<><>*><>

ಅಭಿವ್ಯಕ್ತಿ ಸ್ವಾತಂತ್ರ್ಯವೆಂದರೆ, ಪ್ರತ್ಯೇಕತಾ ವಾದಕ್ಕೆ ಬೆಂಬಲ ನೀಡುವುದೆಂದು ಅರ್ಥೈಸುವ ಅಗತ್ಯವಿಲ್ಲ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಕೆನಡಾದಲ್ಲಿ ನಡೆಯುತ್ತಿರುವ ಪ್ರತ್ಯೇಕತಾ ಗುಂಪುಗಳನ್ನು ನಡೆಸುತ್ತಿರುವ ಘಟನೆಗಳ ಕುರಿತು ಪ್ರಸ್ತಾಪಿಸಿದ ಅವರು, ಪ್ರತ್ಯೇಕತಾ ವಾದಿಗಳು ಮತ್ತು ಉಗ್ರಗಾಮಿ

ಶಕ್ತಿಗಳು ಪ್ರತ್ಯೇಕತಾ ವಾದವನ್ನು ಮಾತ್ರವೇ ಪ್ರತಿಪಾದಿಸುತ್ತಿರುವುದಕ್ಕೆ ಸಾಕ್ಷ್ಯಾದಾರಗಳಿವೆ. ಕೆನಡಾದ ರಾಜಕೀಯ ವ್ಯವಸ್ಥೆಯಲ್ಲಿ ಈ ಗುಂಪುಗಳು ರಾಜಕೀಯ ಅಸ್ತಿತ್ವವನ್ನು ಪಡೆದುಕೊಂಡಿವೆ ಎಂದು ತಿಳಿಸಿದರು. ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿದ ಅವರು, ಪ್ರತ್ಯೇಕತಾ ವಾದ ಮತ್ತು ಉಗ್ರವಾದವನ್ನು ಬೆಂಬಲಿಸುತ್ತಿರುವ ವ್ಯಕ್ತಿಗಳು ಕೆನಡಾದ ರಾಜಕಾರಣದಲ್ಲಿಂದು ಪ್ರಮುಖ ಸ್ಥಾನಗಳನ್ನು ಅಲಂಕರಿಸಿದ್ದಾರೆ ಎಂದರು.

**<><*<><>*><>**

ಆಫ್ಘಾನಿಸ್ತಾನದಲ್ಲಿ ಸುರಿದ ಭಾರೀ ಮಳೆಯಿಂದಾಗಿ ಉಂಟಾದ ಪ್ರವಾಹದಿಂದ ಅಲ್ಲಿನ ಪ್ರಾಂತ್ಯವೊಂದರಲ್ಲಿ ೨೦೦ ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ ಎಂದು ವಿಶ್ವ ಸಂಸ್ಥೆ ತಿಳಿಸಿದೆ. ಬಾಘ್ಲಾನ್‌ನ ಉತ್ತರ ಪ್ರಾಂತ್ಯ ಒಂದರಲ್ಲೇ ನಿನ್ನೆ ೬೨ ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ. ಭಾರೀ ಮಳೆಯಿಂದಾಗಿ ಈ ಭಾಗದಲ್ಲಿ ಸಾವಿರಾರು ಮನೆಗಳು ನೆಲಕ್ಕುರುಳಿವೆ ಅಥವಾ ಜಖಮ್‌ಗೊಂಡಿವೆ ಎಂದು ವಿಶ್ವಸಂಸ್ಥೆಯ ವಲಸೆ ಕುರಿತ ಅಂತಾರಾಷ್ಟ್ರೀಯ ಸಂಘಟನೆ ಮಾಹಿತಿ ನೀಡಿದೆ.

**<><*<><>*><>**

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಕ್ರೀಡಾಂಗಣದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳ ನಡುವೆ ನಡೆಯಬೇಕಿದ್ದ ಪಂದ್ಯ ವರುಣನ ಅವಕೃಪೆಯಿಂದ ವಿಳಂಬವಾಗಿದೆ. ಮೂರು ವರ್ಷಗಳಲ್ಲಿ ಮೊದಲ ಬಾರಿ ಪ್ಲೇಆಫ್ ಪ್ರವೇಶಿಸುವ ಕೊಲ್ಕೊತ್ತಾ ನೈಟ್ ರೈಡರ್ಸ್ ತಂಡ ಗೆಲ್ಲುವ ಉಮ್ಮಸ್ಸಿನಲ್ಲಿದೆ. ಇನ್ನು ಸ್ಪರ್ಧೆಯಿಂದ ಅಧಿಕೃತವಾಗಿ ಹೊರ ಬಿದ್ದಿರುವ ಮುಂಬೈ, ತಂಡ ಗೌರವ ಉಳಿಸಿಕೊಳ್ಳಲು ಪಂದ್ಯ ಗೆಲ್ಲುವ ಅನಿವಾರ್ಯತೆ ಇದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**